ಕರ್ನಾಟಕ ಸರ್ಕಾರ

# ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಇವರ ನಡವಳಿಗಳು

ವಿಷಯ: 2021-22ನೇ ಶೈಕ್ಷಣಿಕ ಸಾಲಿನಿಂದ ಪ್ರಾರಂಭಗೊಂಡಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಐನಾಪುರ, ಕಾಗವಾಡ ತಾಲ್ಲೂಕು, ಬೆಳಗಾವಿ ಜಿಲ್ಲೆ, ಈ ಶಾಲೆಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಅನುದಾನವನ್ನು ಬಿಡುಗಡೆ ಮಾಡುವ ಕುರಿತು.

ಉಲ್ಲೇಖ:
1. ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 159 ಎಂಡಿಎಸ್ 2021 ದಿ:12.04.2021.
2. ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 159 ಎಂಡಿಎಸ್ 2021 ದಿ:01.07.2021.
3. ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಳಗಾವಿ ಜಿಲ್ಲೆ ರವರ ಪತ್ರ ಸಂಖ್ಯೆ:ಅಸಂಕಇಬೆ/ಆಡಳಿತ/ವಿವ-06/2021-22/133 ದಿನಾಂಕ:12.08.2021

******

**ಪ್ರಸ್ತಾವನೆ:-**

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1)ರ ಸರ್ಕಾರಿ ಆದೇಶದಲ್ಲಿ 2020-21 ನೇ ಸಾಲಿನಲ್ಲಿ ಚಾಲ್ತಿಯಲ್ಲಿರುವ ಯೋಜನೆಗಳನ್ನು 2021-22 ನೇ ಸಾಲಿನವರೆಗೆ ಮುಂದುವರೆಸಲು ಆದೇಶಿಸಿದೆ. ಉಲ್ಲೇಖ(2)ರ ಸರ್ಕಾರಿ ಆದೇಶದಲ್ಲಿ ಅಲ್ಪಸಂಖ್ಯಾತರ ವಸತಿ ಶಾಲೆಗಳ ನಿರ್ವಹಣೆಗೆ ಎರಡನೇ ತ್ರೈಮಾಸಿಕ ಕಂತಿನ ಅನುದಾನ ಬಿಡುಗಡೆ ಮಾಡಲಾಗಿದೆ.

ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 178 ಎಂಡಿಎಸ್ 2021 ದಿನಾಂಕ:27.05.2021ರಲ್ಲಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಕಾರವಾರ, ಉತ್ತರಕನ್ನಡ ಜಿಲ್ಲೆ ಎಂಬುದನ್ನು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಐನಾಪುರ, ಕಾಗವಾಡ ತಾಲ್ಲೂಕು, ಬೆಳಗಾವಿ ಜಿಲ್ಲೆ ಎಂದು ತಿದ್ದುಪಡಿ ಮಾಡಿ ಆದೇಶಿಸಿದೆ. ಸದರಿ ವಸತಿ ಶಾಲೆಯನ್ನು 2021-22ನೇ ಶೈಕ್ಷಣಿಕ ಸಾಲಿನಿಂದ ಪ್ರಾರಂಭಿಸಲು ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಅನುದಾನ ಬಿಡುಗಡೆ ಗೊಳಿಸುವಂತೆ ಬೆಳಗಾವಿ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರು ಉಲ್ಲೇಖ(3)ರಲ್ಲಿ ಕೋರಿರುತ್ತಾರೆ

ಅದರಂತೆ ಬೆಳಗಾವಿ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರಿಗೆ ಅನುಬಂಧ-01ರಲ್ಲಿರುವಂತೆ ಅನುದಾನ ಬಿಡುಗಡೆ ಮಾಡಲು ನಿರ್ಧರಿಸಿದ್ದು ಅದರಂತೆ ಈ ಆದೇಶ.

## ಆದೇಶ

**ಸಂಖ್ಯೆ: ಅಸಂನಿ/ಅ/ವಶಾ/ಅನು/ಸಿಆರ್-04(059)/2021-22** **ದಿನಾಂಕ:21.09.2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನಾಧರಿಸಿ, 2021-22ನೇ ಶೈಕ್ಷಣಿಕ ಸಾಲಿನಿಂದ ಪ್ರಾರಂಭಿಸಬೇಕಾಗಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಐನಾಪುರ, ಕಾಗವಾಡ ತಾಲ್ಲೂಕು, ಬೆಳಗಾವಿ ಜಿಲ್ಲೆ, ಈ ವಸತಿ ಶಾಲೆಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು **ಅನುಬಂಧ-01ರಲ್ಲಿ** ನಮೂದಿಸಿರುವಂತೆ ಕಲ್ಪಿಸಲು ಒಟ್ಟು **ರೂ.10,00,000/-(ಹತ್ತು ಲಕ್ಷ ರೂ.ಗಳು ಮಾತ್ರ)**ಗಳ ಅನುದಾನವನ್ನು, **ಬೆಳಗಾವಿ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು**, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರಿಗೆ ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು ಅನುದಾನ ಬಿಡುಗಡೆ ಮಾಡಿದೆ.

Contd....2

ರವಾನಿಸಿದೆ.
ದಿನಾಂಕ 24.09.21

| ಅನುಬಂಧ-01 | | | |
|---|---|---|---|
| ಕ್ರಸಂ | ವೆಚ್ಚ/ಸಾಮಗ್ರಿಗಳು | ಅವಧಿಗೆ(ತಿಂಗಳು) | ಬಿಡುಗಡೆಯಾದ ಮೊತ್ತ(ರೂ.ಗಳಲ್ಲಿ) |
| 1 | ಆಹಾರ ವೆಚ್ಚ(60 ವಿದ್ಯಾರ್ಥಿಗೆ ಮಾಹೆಯಾನ ರೂ.1600/-ರಂತೆ) | 3 | 2,88,000 |
| 2 | ಸ್ಟೇಷನರಿ ವೆಚ್ಚ(ಲೇಖನಾ ಸಾಮಾಗ್ರಿ ಹಾಗೂ ಇತರೆ) | 10 | 50,000 |
| 3 | ವಿದ್ಯಾರ್ಥಿಗಳಿಗೆ ತಟ್ಟೆ, ಲೋಟ, ಟ್ರಂಕ್ ಮತ್ತು ಅಡುಗೆ ಮನೆಗೆ ಪಾತ್ರೆ ಪಳಗ, ಬಯೋಮೆಟ್ರಿಕ್ ಯಂತ್ರ ಇತ್ಯಾದಿಗಳ ಖರೀದಿ | - | 1,00,000 |
| 4 | ಗ್ಯಾಸ್ ಸಿಲಿಂಡರ್, ಪೈಪಲೈನ್ ಮತ್ತು ಸ್ಟೊವ್ ಖರೀದಿ | - | 1,00,000 |
| 5 | ಗ್ರಂಥಾಲಯ & ಕ್ರೀಡಾ ಉಪಕರಣಗಳು | - | 50,000 |
| 6 | ಕಛೇರಿ ಪೀಠೋಪಕರಣಗಳು ಹಾಗೂ ಕಲಿಕಾ ಮತ್ತು ಬೋಧನಾ ಉಪಕರಣಗಳು | - | 1,00,000 |
| 7 | ವಸತಿ ನಿಲಯದ ಪೀಠೋಪಕರಣಗಳು | - | 1,00,000 |
| 8 | ಗಣಕಯಂತ್ರ, ಪ್ರಿಂಟರ್ & ಝೆರಾಕ್ಸ್ | - | 82,500 |
| 9 | ವಾಟರ್ ಫಿಲ್ಟರ್ & ಇತರೆ | - | 25,000 |
| 10 | ಶೌಚಾಲಯ/ಆವರಣ ಸ್ವಚ್ಚತೆ | 10 | 20,000 |
| 11 | ದಿನಪತ್ರಿಕೆ & ಇತರೆ | 10 | 4,500 |
| 12 | ವೈದ್ಯಕೀಯ ವೆಚ್ಚ | 10 | 30,000 |
| 13 | ಸ್ನಾನ ಗೃಹ ಹಾಗೂ ಶೌಚಾಲಯಕ್ಕೆ ಬಕೆಟ್, ಜಗ್, ಡಸ್ಟಬಿನ್, ಮ್ಯಾಟ್, ಕಸಬರಿಕೆ ಇತ್ಯಾದಿಗಳ ಖರೀದಿ | - | 50,000 |
| | **ಒಟ್ಟು ಮೊತ್ತ** | | **10,00,000** |

ನಿಬಂಧನೆಗಳು:-

1) ಈ ಆದೇಶದಲ್ಲಿ ಬಿಡುಗಡೆ ಮಾಡಲಾದ ಅನುದಾನವನ್ನು ಮಾರ್ಗಪಲ್ಲಟ ಮಾಡುವಂತಿಲ್ಲ. ತಪ್ಪಿದ್ದಲ್ಲಿ ಮುಂದಿನ ಎಲ್ಲಾ ಆಗು ಹೋಗುಗಳಿಗೆ ತಮ್ಮನ್ನು ನೇರ ಹೊಣೆಗಾರನ್ನಾಗಿ ಮಾಡಲಾಗುವುದು.
2) ಎಲ್ಲಾ ಖರ್ಚು-ವೆಚ್ಚವನ್ನು ಕೆ.ಟಿ.ಪಿ.ಪಿ ಕಾಯ್ದೆ ಪ್ರಕಾರ ನಿಯಮಾನುಸಾರ ಖರೀದಿಸತಕ್ಕದ್ದು.
3) ಖರೀದಿಸಿದ ಸಾಮಾಗ್ರಿಗಳನ್ನು ದಾಸ್ತಾನು ವಹಿಯಲ್ಲಿ ಕಡ್ಡಾಯವಾಗಿ ನಮೂದಿಸಿ, ನಿರ್ವಹಿಸಬೇಕು.
4) ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನಕ್ಕೆ ಖರ್ಚು ಭರಿಸಿರುವ ಅನುದಾನದ ವಿವರ, (ಖಜಾನೆಯಿಂದ ಪಡೆದ 62ಬಿ ಪ್ರತಿಯೊಂದಿಗೆ) ನಿರ್ದೇಶನಾಲಯಕ್ಕೆ ಸಲ್ಲಿಸತಕ್ಕದ್ದು.
5) ಸದರಿ ಆದೇಶದಲ್ಲಿ ಬಿಡುಗಡೆ ಮಾಡಲಾದ ಅನುದಾನವನ್ನು ಮಾರ್ಚ್-2022ರ ಒಳಗಾಗಿ ವೆಚ್ಚ ಮಾಡತಕ್ಕದ್ದು.

Contd....3

ಇದಕ್ಕೆ ತಗಲುವ ವೆಚ್ಚವನ್ನು ಲೆಕ್ಕಶೀರ್ಷಿಕೆ 2225-04-277-0-10 ಆಬ್ಜೆಕ್ಟ್ ಕೋಡ್ (059) ಅಲ್ಪಸಂಖ್ಯಾತರ ವಸತಿ ಶಾಲೆಗಳ ನಿರ್ವಹಣೆ ರಾಜ್ಯವಲಯ ಯೋಜನೆಯಡಿ 2021-22ನೇ ಸಾಲಿನಲ್ಲಿ ಒದಗಿಸಲಾದ ಆಯವ್ಯಯದಲ್ಲಿ ಭರಿಸತಕ್ಕದ್ದು.

21/9/21

ನಿರ್ದೇಶಕರು,
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,
ಬೆಂಗಳೂರು.

ಪ್ರತಿಯನ್ನು:-

1. ಕರ್ನಾಟಕ ಮಹಾಲೇಖಪಾಲರು, ಬೆಂಗಳೂರು
2. ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ಬೆಂಗಳೂರು.
3. ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವೆಚ್ಚ-3, ಬೆಂಗಳೂರು.
4. ಉಪ ನಿರ್ದೇಶಕರು, ಖಜಾನೆ ಗಣಕೀಕರಣ ಕೇಂದ್ರ, 2ನೇ ಮಹಡಿ, ಖನಿಜ ಭವನ, ಬೆಂಗಳೂರು.
5. ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಅಗತ್ಯಕ್ರಮಕ್ಕಾಗಿ.
6. ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಖಜಾನಾಧಿಕಾರಿಗಳು.
7. ಲೆಕ್ಕಪತ್ರ ಶಾಖೆ/ಕಛೇರಿ ಪ್ರತಿ.